ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 39 ಟಿಇಸಿ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, 2ನೇ ಗೇಟ್, 6ನೇ ಮಹಡಿ,
ಬೆಂಗಳೂರು, ದಿನಾಂಕ:15-06-2019.

ಇವರಿಂದ:-

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಶಿಕ್ಷಣ ಇಲಾಖೆ, (ಉನ್ನತ ಶಿಕ್ಷಣ)
ಬೆಂಗಳೂರು-560001.

ಇವರಿಗೆ:-

ರಿಜಿಸ್ಟ್ರಾರ್,
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ,
ಜ್ಞಾನಸಂಗಮ,
ಬೆಳಗಾವಿ.

ಮಾನ್ಯರೇ,

ವಿಷಯ:- ಆರ್.ವಿ. ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಬೆಂಗಳೂರು ಈ ಹೊಸ ಸಂಸ್ಥೆಯ ಕೋರ್ಸುಗಳಿಗೆ ಸಂಯೋಜನೆ ನೀಡುವ ಬಗ್ಗೆ.

ಉಲ್ಲೇಖ:- 1) ಸೆಕ್ರೆಟರಿ, ಆರ್.ವಿ.ಎಜುಕೇಶನಲ್ ಇನ್‌ಸ್ಟಿಟ್ಯೂಷನ್ಸ್ ಬೆಂಗಳೂರು ರವರ ದಿನಾಂಕ:25.02.2019ರ ಪತ್ರ.
2) ಕುಲಸಚಿವರು ವಿತಾವಿ ರವರ ಪತ್ರ ಸಂಖ್ಯೆ: ವಿತಾವಿ/ ಶೈಕ್ಷಣಿಕ/2019-20/ಎ-6/1138, ದಿನಾಂಕ:22.05.2019 ಮತ್ತು 30.04.2019.

>>><<<

ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ನ ಆರ್.ವಿ. ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಕೊತ್ತನೂರು, 8ನೇ ಹಂತ, ಜೆ.ಪಿ.ನಗರ, ಬೆಂಗಳೂರು-78 ಇಲ್ಲಿ 2019-20ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ 04 ಕೋರ್ಸುಗಳನ್ನು ಪ್ರಾರಂಭಿಸಲು ಸಂಯೋಜನೆ ಕೋರಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ಅರ್ಜಿಯನ್ನು ಸ್ಥಳೀಯ ವಿಚಾರಣಾ ಸಮಿತಿಯ, ಅಕಾಡೆಮಿಕ್ ಸೆನೆಟ್ ಮತ್ತು ಕಾರ್ಯಕಾರಿ ಮಂಡಳಿ ಶಿಫಾರಸ್ಸು ಹಾಗೂ ಎಐಸಿಟಿಇಯ ಅನುಮೋದನೆಯ ಹಿನ್ನೆಲೆಯಲ್ಲಿ ಸಂವೀಕ್ಷಿಸಲಾಗಿದೆ.

ಎಐಸಿಟಿಇಯ ಅನುಮೋದನೆ ಮತ್ತು ತಾಂತ್ರಿಕ ವಿಶ್ವವಿದ್ಯಾಲಯದ ಪ್ರಸ್ತಾವನೆಯನ್ನಾಧರಿಸಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಧಿನಿಯಮ 1994 ರ 40(5) ನೇ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಆರ್.ವಿ. ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಬೆಂಗಳೂರು ಈ ಕಾಲೇಜಿನಲ್ಲಿ ಹೊಸದಾಗಿ ಈ ಕೆಳಕಂಡ ಕೋರ್ಸುಗಳಿಗೆ ಹಾಗೂ ವಿದ್ಯಾರ್ಥಿ ಪ್ರಮಾಣದೊಂದಿಗೆ 2019-20 ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಸಂಯೋಜನೆಯನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಾನು ನಿರ್ದೇಶಿತಳಾಗಿದ್ದೇನೆ.

| Sl.No | Courses | Year | Intake |
|---|---|---|---|
| 1 | Computer Science & Engineering | 2019-20 | 60 |
| 2 | Information Science & Engineering | 2019-20 | 60 |
| 3 | Electronics & Communication Engineering | 2019-20 | 60 |
| 4 | Mechanical Engineering | 2019-20 | 60 |

ಷರತ್ತುಗಳು:-

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸುಗಳೆಂದು ಪರಿಗಣಿಸತಕ್ಕದ್ದು;
2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3) ನಿಗಧಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5) ಸ್ಥಳೀಯ ವಿಚಾರಣಾ ಸಮಿತಿ, ಎಐಸಿಟಿಇ ವಿಧಿಸಿರುವ ಪ್ರತಿಯೊಂದು ಷರತ್ತಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6) ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗಧಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7) ದಿನಾಂಕ:13.08.1997 ರಂದು ವಿಶಾಖ ವಿರುದ್ಧ ರಾಜಸ್ತಾನ ಸರ್ಕಾರ ಮೊಕದ್ದಮೆಯಲ್ಲಿ ಸುಪ್ರೀಂ ಕೋರ್ಟ ನೀಡಿರುವ ತೀರ್ಪಿನನಾನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯ ಮೇಲೆ ಲೈಂಗಿಕ ಕಿರುಕುಳ ನೀಡಿದ್ದಲ್ಲಿ ಅದು ಸಂಜ್ಞೆಯ ಅಪರಾಧ (**Cognizable offence**) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
8) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
9) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವರೆಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.

11) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.

12) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ದತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ

15/6/19

(ಮನೋರಮ ಡಿ.ಸಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

15/6/19

ಪ್ರತಿ:

1) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2) ಪ್ರಾಂಶುಪಾಲರು, ಆರ್.ವಿ. ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಕೊತ್ತನೂರು, 8ನೇ ಹಂತ, ಜೆ.ಪಿ.ನಗರ, ಬೆಂಗಳೂರು-78